# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 555 |
| ವಿಧಾನ ಪರಿಷತ್ತು ಸದಸ್ಯರ ಹೆಸರು | : | ಶ್ರೀ ಬಿ.ಜಿ. ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| ಉತ್ತರಿಸಬೇಕಾದ ದಿನಾಂಕ | : | 09.03.2026 |
| ಉತ್ತರಿಸುವ ಸಚಿವರು | : | ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಹಾಗೂ ಕಾನೂನು ಮಾಪನಶಾಸ್ತ್ರ ಇಲಾಖೆ ಸಚಿವರು |

<table>
<tr><th>. ಸಂ</th><th>ಪ್ರಶ್ನೆ</th><th>ಉತ್ತರ</th></tr>
<tr><td>ಅ</td><td>ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಗಳಲ್ಲಿ ಬಿಪಿಎಲ್ ಪಡಿತರ ಚೀಟಿಯನ್ನು ಹೊಂದಿರುವ ಕುಟುಂಬಗಳು ಎಷ್ಟು;</td><td>ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಯಲ್ಲಿ ಚಾಲ್ತಿಯಲ್ಲಿರುವ ಆದ್ಯತಾ ಪಡಿತರ ಚೀಟಿಗಳ ವಿವರ ದಿನಾಂಕ: 22.02.2026 ರನ್ವಯ ಈ ಕೆಳಕಂಡಂತೆ ಪಡಿತರ ಚೀಟಿಗಳಿರುತ್ತವೆ.<br>ಕಲಬುರಗಿ
<table>
<tr><th>ಪಡಿತರ ಚೀಟಿಗಳ ವಿಧ</th><th>ಪಡಿತರ ಚೀಟಿ</th><th>ಫಲಾನುಭವಿಗಳು</th></tr>
<tr><td>ಅಂತ್ಯೋದಯ ಅನ್ನಯೋಜನೆ</td><td>60,538</td><td>2,33,799</td></tr>
<tr><td>ಆದ್ಯತಾ ಪಡಿತರ ಚೀಟಿ</td><td>5,16,697</td><td>18,69,086</td></tr>
<tr><td>ಒಟ್ಟು</td><td>5,77,235</td><td>21,02,885</td></tr>
</table>
ಯಾದಗಿರಿ
<table>
<tr><th>ಪಡಿತರ ಚೀಟಿಗಳ ವಿಧ</th><th>ಪಡಿತರ ಚೀಟಿ</th><th>ಫಲಾನುಭವಿಗಳು</th></tr>
<tr><td>ಅಂತ್ಯೋದಯ ಅನ್ನಯೋಜನೆ</td><td>28,203</td><td>1,13,863</td></tr>
<tr><td>ಆದ್ಯತಾ ಪಡಿತರ ಚೀಟಿ</td><td>2,40,717</td><td>9,47,210</td></tr>
<tr><td>ಒಟ್ಟು</td><td>2,68,920</td><td>10,61,073</td></tr>
</table></td></tr>
<tr><td>ಆ</td><td>ಅನ್ನಭಾಗ್ಯ ಯೋಜನೆಯಡಿ ಪಡಿತರ ಚೀಟಿದಾರರಿಗೆ ಪ್ರತಿ ತಿಂಗಳು ಎಷ್ಟು ಕೆಜಿ ಅಕ್ಕಿ ಹಾಗೂ ಇತರೆ ಪದಾರ್ಥಗಳನ್ನು ವಿತರಿಸಲಾಗುತ್ತಿದೆ;</td><td>ಪ್ರತಿ ಅಂತ್ಯೋದಯ ಅನ್ನ ಯೋಜನೆ (AAY) ಕಾರ್ಡಿಗೆ 35 ಕೆ.ಜಿ ಆಹಾರ ಧಾನ್ಯಗಳನ್ನು ಪ್ರತಿ ಮಾಹೆ ವಿತರಣೆ ಮಾಡಲಾಗುತ್ತಿದ್ದು, ಪ್ರಸ್ತುತ 14 ಕೆ.ಜಿ ಅಕ್ಕಿ ಮತ್ತು ಪ್ರಾದೇಶಿಕ ಆಹಾರ ಪದ್ಧತಿಗನುಗುಣವಾಗಿ ಕನಿಷ್ಠ ಬೆಂಬಲ ಬೆಲೆ ಯೋಜನೆಯಡಿ ಖರೀದಿಸಿದ 21 ಕೆ.ಜಿ ರಾಗಿ/ಜೋಳವನ್ನು ಹಂಚಿಕೆ ಮಾಡಲಾಗುತ್ತಿದೆ.<br><br>ಕೇಂದ್ರ ವ್ಯಾಪ್ತಿಯ ಆದ್ಯತಾ ಪಡಿತರ ಚೀಟಿಯ (ಬಿಪಿಎಲ್) ಪ್ರತಿ ಸದಸ್ಯರಿಗೆ ಪ್ರತಿ ಮಾಹೆ 5 ಕೆ.ಜಿ ಆಹಾರ ಧಾನ್ಯಗಳನ್ನು ವಿತರಣೆ ಮಾಡಲಾಗುತ್ತಿದ್ದು, ಪ್ರಸ್ತುತ 2 ಕೆ.ಜಿ ಅಕ್ಕಿ ಮತ್ತು ಪ್ರಾದೇಶಿಕ ಆಹಾರ ಪದ್ಧತಿಗನುಗುಣವಾಗಿ ಕನಿಷ್ಠ ಬೆಂಬಲ ಬೆಲೆ ಯೋಜನೆಯಡಿ ಖರೀದಿಸಿದ ರಾಗಿ ಮತ್ತು ಜೋಳದ ಲಭ್ಯ ಪ್ರಮಾಣದಂತೆ 03 ಕೆ.ಜಿ ರಾಗಿ/ ಜೋಳವನ್ನು ಹಂಚಿಕೆ ಮಾಡಲಾಗುತ್ತಿದೆ.<br><br>ರಾಜ್ಯ ವ್ಯಾಪ್ತಿಯ ಆದ್ಯತಾ ಪಡಿತರ ಚೀಟಿಯ (ಬಿಪಿಎಲ್) ಪ್ರತಿ ಸದಸ್ಯರಿಗೆ ರಾಜ್ಯ NFSA ಅಡಿ ಪ್ರತಿ ಮಾಹೆ 5 ಕೆ.ಜಿ ಅಕ್ಕಿಯನ್ನು ಹಂಚಿಕೆ ಮಾಡಲಾಗುತ್ತಿದೆ. ರಾಜ್ಯ ಸರ್ಕಾರದಿಂದ ಅನ್ನಭಾಗ್ಯ ಯೋಜನೆಯಡಿ ಪ್ರತಿ ಅರ್ಹ ಫಲಾನುಭವಿಗೆ 05 ಕೆ.ಜಿ ಹೆಚ್ಚುವರಿ ಅಕ್ಕಿಯನ್ನು ವಿತರಿಸಲಾಗುತ್ತಿದೆ.</td></tr>
</table>

| | | |
|---|---|---|
| ಇ | ಕೆಲವು ಕುಟುಂಬಗಳು ಪಡೆಯುತ್ತಿರುವ ಅಕ್ಕಿ ಪ್ರಮಾಣವು ತಿಂಗಳ ಬಳಕೆಯಾಗಿ ಹೆಚ್ಚುವರಿಯಾಗಿ ಉಳಿಯುವ ಅಕ್ಕಿಯನ್ನು ಕಾಳಸಂತೆಯಲ್ಲಿ ಮಾರಾಟವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ ಅಕ್ಕಿಯ ದುರುಪಯೋಗವಾಗದಂತೆ ತಡೆಯಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು? (ವಿವರ ನೀಡುವುದು) | ಕಾಳಸಂತೆಯಲ್ಲಿ ಪಡಿತರ ಅಕ್ಕಿ ಮಾರಾಟವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿರುತ್ತದೆ.<br>1. ಅದರಂತೆ ಪಡಿತರ ಅಕ್ಕಿಯ ದುರ್ಬಳಕೆಯನ್ನು ತಡೆಗಟ್ಟಲು ಇಲಾಖೆಯ ಹಾಗೂ ಅಧಿಕಾರಿಗಳು ಕಾರ್ಯನಿರ್ವಹಕ ಸಿಬ್ಬಂದಿಗಳಿಗೆ ಕಾಲ ಕಾಲಕ್ಕೆ ಮೇಲ್ವಿಚಾರಣೆ ಮಾಡುವಂತೆ ನಿರ್ದೇಶನ ನೀಡಿ ಅಗತ್ಯ ವಸ್ತುಗಳ ಕಾಯ್ದೆ 1955 ರಡಿ ಕ್ರಿಮಿನಲ್ ಪ್ರಕರಣ ದಾಖಲಿಸಲಾಗುತ್ತದೆ.<br>2. ಪಡಿತರ ಚೀಟಿದಾರರು ಪಡಿತರ ಅಕ್ಕಿಯನ್ನು ದುರ್ಬಳಕೆ ಮಾಡಿಕೊಂಡ ಪ್ರಕರಣಗಳು ಕಂಡುಬಂದಲ್ಲಿ ಸದರಿ ಪಡಿತರ ಚೀಟಿಗಳನ್ನು ರದ್ದು ಪಡಿಸಿ ಅಂತವರ ವಿರುದ್ಧ ನಿಯಾಮಾನುಸಾರ ಸೂಕ್ತ ಕ್ರಮ ಕೈಗೊಳ್ಳಲು ನಿರ್ದೇಶಿಸಲಾಗಿದೆ.<br>3. ನ್ಯಾಯಬೆಲೆ ಅಂಗಡಿ, ತಾಲ್ಲೂಕು, ಜಿಲ್ಲಾ ಹಾಗೂ ರಾಜ್ಯ ಮಟ್ಟದಲ್ಲಿ ಜಾಗೃತಿ ಸಮಿತಿಗಳನ್ನು ರಚಿಸಿ ಪಡಿತರ ವಿತರಣೆಯನ್ನು ಪರಿಶೀಲಿಸಲಾಗುತ್ತಿದೆ.<br>4. ಪ್ರತಿ ಮಾಹೆ ನ್ಯಾಯಬೆಲೆ ಅಂಗಡಿ ಮಟ್ಟದಲ್ಲಿ ಆಹಾರ ಅದಾಲತ್ ಗಳನ್ನು ನಡೆಸಿ ಪಡಿತರ ಚೀಟಿದಾರರಿಗೆ ಪಡಿತರ ವಿತರಣೆ ಬಗ್ಗೆ ಜಾಗೃತಿ ಮೂಡಿಸಲಾಗುತ್ತಿದೆ.<br>5. ರಾಜ್ಯ ಮಟ್ಟದಲ್ಲಿ ಆಹಾರ ಜಾಗೃತ ದಳ ರಚಿಸಿ ಅಕ್ರಮಗಳ ಬಗ್ಗೆ ನಿಯಮಾನುಸಾರ ಕ್ರಮವಹಿಸಲಾಗುತ್ತಿದೆ.<br>6. ಕಾಳಸಂತೆಯಲ್ಲಿ ಪಡಿತರ ಅಕ್ಕಿ ಮಾರಾಟವಾಗುತ್ತಿರುವುದನ್ನು ತಡೆಗಟ್ಟಲು ಅಗತ್ಯ ವಸ್ತುಗಳ ಕಾಯ್ದೆ 1955 ರಡಿ 2025-26ನೇ ಸಾಲಿನ ಜನವರಿ 2026ರ ಅಂತ್ಯದವರೆಗೆ ಒಟ್ಟು 747 ಪ್ರಕರಣಗಳನ್ನು ದಾಖಲಿಸಿ 707 ಆರೋಪಿಗಳನ್ನು ಬಂಧಿಸಲಾಗಿರುತ್ತದೆ ಹಾಗೂ 45,339.39 ಕ್ವಿಂಟಾಲ್ ಆಹಾರ ಧಾನ್ಯ ವಶಪಡಿಸಿಕೊಳ್ಳಲಾಗಿರುತ್ತದೆ. |

ಇ- ಆನಾಸ 55 ಡಿಆರ್ಎ 2026

(ಕೆ.ಹೆಚ್. ಮುನಿಯಪ್ಪ)
ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ
ವ್ಯವಹಾರಗಳ ಹಾಗೂ ಕಾನೂನು ಮಾಪನಶಾಸ್ತ್ರ
ಇಲಾಖಾ ಸಚಿವರು